ಪತ್ರಿಕೆಯ ಹೆಸರು : NAME OF THE NEWS PAPER: ... / SUBJECT: ... ದಿನಾಂಕ : DATE:

## ಕೊನೆಗೂ ವಕೀಲರ ಮೂಲಕ ದೂರು ಸಲ್ಲಿಸಿದ ಸಂತ್ರಸ್ತ ಯುವತಿ | ಆಮಿಷ ತೋರಿ ಅತ್ಯಾಚಾರ ಮಾಡಿದ ಆರೋಪ

# ಜಾರಕಿಹೊಳಿ ವಿರುದ್ಧ 20 ಅಂಶದ ದೂರು

**ಮಾ**ಜಿ ಸಚಿವ ರಮೇಶ್ ಜಾರಕಿಹೊಳಿ ಅವರ ರಾಸಲೀಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಡಿಯಲ್ಲಿರುವಾಕೆ ಎಂದು ಹೇಳಲಾಗಿರುವ ಯುವತಿ ಕೊನೆಗೂ ವಕೀಲರ ಮೂಲಕ ಪೊಲೀಸ್ ಆಯುಕ್ತ ಕಮಲ್ ಪಂತ್ ಅವರಿಗೆ ಎರಡು ಪುಟಗಳ ದೂರು ಸಲ್ಲಿಸಿದ್ದಾಳೆ. ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಅವರು ಸರ್ಕಾರಿ ಕೆಲಸ ಕೊಡಿಸುವುದಾಗಿ ನಂಬಿಸಿ, ಲೈಂಗಿಕ ಸಂಪರ್ಕ ಮಾಡಿ, ವಿಡಿಯೊ ಕರೆ ಮೂಲಕ ನಗ್ನವಾಗಿ ಮಾತನಾಡಲು ಪುಸಲಾಯಿಸಿ, ಕೆಲಸ ಕೊಡಿಸದೆ ವಂಚಿಸಿ ಜೀವ ಬೆದರಿಕೆ ಹಾಕಿರುವ ಬಗ್ಗೆ ದೂರು ನೀಡಿದ್ದಾಳೆ.

**ದೂರಿನ ಪೂರ್ಣ ಪಾಠವನ್ನು ಇಲ್ಲಿ ನೀಡಲಾಗಿದೆ.**

ಸಂ.ಕ. ಸಮಾಚಾರ ಬೆಂಗಳೂರು 27/3/21

ನಾನು ಬೆಂಗಳೂರು ನಗರದಲ್ಲಿ ಉದ್ಯೋಗ ಹುಡುಕಿಕೊಂಡು ಬಂದು ನೆಲೆಸಿದ್ದು, ಕಿರುಚಿತ್ರ ಮಾಡುವ ಸಲುವಾಗಿ ಸಚಿವರಾಗಿದ್ದ ರಮೇಶ್ ಜಾರಕಿಹೊಳಿ ಅವರನ್ನು ಒಮ್ಮೆ ಭೇಟಿ ಮಾಡಿದ್ದು ನಂತರ ಅವರು ನನ್ನ ಮೊಬೈಲ್ ನಂಬರ್ ಪಡೆದು ಕರೆ ಮಾಡುವುದಾಗಿ ತಿಳಿಸಿದ್ದರು.

ನಂತರ ಅವರು ಕರೆ ಮಾಡಿ ನನ್ನ ಬಗ್ಗೆ ಕುಟುಂಬದ ಬಗ್ಗೆ ವಿಚಾರಿಸುವ ಸಲುಗೆಯಿಂದ ಮಾತನಾಡಲು ಆರಂಭಿಸಿದರು. ಸಚಿವರು ನನ್ನನ್ನು ಅಷ್ಟು ಕಾಳಜಿಯಿಂದ ಮಾತನಾಡಿಸಿದ್ದು ನನಗೆ ತುಂಬ ಖುಷಿಯಾಗಿ ಅವರನ್ನು ಗೌರವದಿಂದ ಮಾತನಾಡಿಸಿದೆ. ಆಗಾಗ್ಗೆ ನನಗೆ ಕರೆ ಮಾಡಿ ಮಾತನಾಡಲು ಆರಂಭಿಸಿದರು.

ನನಗೆ ತಮ್ಮ ಪ್ರಭಾವ ಬಳಸಿ ಸರ್ಕಾರಿ ನೌಕರಿ ಕೊಡಿಸುವುದಾಗಿ ಹೇಳಿದ್ದರು. ಆದರೆ, ನೌಕರಿ ಕೊಡಿಸುವುದಾಗಿ ಹೇಳಿದ ಬದಲಾಗಿ ನೀನು ನನ್ನ ಜೊತೆ ಎಲ್ಲಾ ರೀತಿಯ ಸಹಕಾರ ನೀಡಬೇಕು ಎಂದು ಕೇಳಿದರು.

ಅವರನ್ನು ಟೀವಿಗಳಲ್ಲಿ ನೋಡಿದ್ದು ಮಂತ್ರಿ ಈ ರೀತಿ ಹೇಳಿದ ಮೇಲೆ ಕೆಲಸ ಕೊಟ್ಟೆ ಕೊಡಿಸುತ್ತಾರೆ ಎಂದು ನಂಬಿದ್ದ ನನ್ನ ಬಳಿ ಕೊಡಲು ಲಕ್ಷಾಂತರ ಹಣವಿಲ್ಲದಿರುವುದನ್ನು ಮುಂಚೆಯೇ ತಿಳಿದುಕೊಂಡು, ಹಣದ ಬದಲು ಅವರ ಜತೆ ಸಹಕರಿಸಿ ಖುಷಿ ನೀಡಬೇಕೆಂದು ಕೇಳಿದ್ದರಿಂದ ನಂಬಿ ಅವರು ಕೇಳಿದಂತೆ



ನಡೆದುಕೊಂಡು ಬಂದೆ.

ಅವರು ದೆಹಲಿಯ ಕರ್ನಾಟಕ ಭವನದಲ್ಲಿ ಉಳಿದುಕೊಂಡಿದ್ದೇನೆ ಎಂದು ವೀಡಿಯೊ ಕರೆ ಮಾಡಿ ನನ್ನ ವೀಡಿಯೊ ಕರೆ ಮಾಡಿ ನನ್ನೊಂದಿಗೆ ಲೈಂಗಿಕ ವಿಚಾರಗಳನ್ನು ಮಾತನಾಡಿ, ನನಗೆ ಬಟ್ಟೆ ತೊಟ್ಟು ನಗ್ನಳಾಗಿ ಖಾಸಗಿ ಅಂಗಗಳನ್ನು ತೋರಿಸುವಂತೆ ಕೇಳಿದರು.

ನಾನು ಅವರು ಹೇಳಿದಂತೆಯೇ ಮಾಡಿದೆ ನಗ್ನವಾಗಿ ದೇಹದ ಗುಪ್ತಾಂಗಗಳನ್ನು ತೋರಿಸಿದೆ. ಅದಕ್ಕೆ ಅವರು ಅಶ್ಲೀಲವಾಗಿ ಮಾತನಾಡಿದ್ದರು. ಪ್ರಭಾವಿ ವ್ಯಕ್ತಿಯಾದ ಕಾರಣ ನಾನು ಅವರು ಹೇಳಿದಂತೆ ಮಾಡಿದೆ.

ನಂತರ ಬೆಂಗಳೂರು ಎಂದು ನನ್ನ ನಿವಾಸಕ್ಕೆ ಬಾ ಮಾತನಾಡಬೇಕು. ನಿನ್ನ ಕೆಲಸದ ವಿಚಾರ ಎಂದರು. ನಾನು ಅವರು ಹೇಳಿದ ಅಪಾರ್ಟ್‌ಮೆಂಟಿಗೆ ಹೋದೆ. ಅವರು ನನ್ನೊಂದಿಗೆ ಅಶ್ಲೀಲವಾಗಿ ಮಾತನಾಡಿ ತಮ್ಮ ರೂಮಿಗೆ ಕರೆದುಕೊಂಡು ಹೋಗಿ ಬಟ್ಟೆ ತೆಗೆಸಿ ಲೈಂಗಿಕ ಕ್ರಿಯೆ ಮಾಡಿದರು ಇದೇ ರೀತಿ 2 ಬಾರಿ ಅವರ ಅಪಾರ್ಟ್‌ಮೆಂಟಿಗೆ ಕರೆಸಿ ಲೈಂಗಿಕ ಕ್ರಿಯೆ ನಡೆಸಿ ಅಶ್ಲೀಲವಾಗಿ ಮಾತನಾಡಿರುತ್ತಾರೆ.

ನಾನು ಎದುರು ಮಾತನಾಡಲು ಹೆದರಿ ಅವರು ಹೇಳಿದಂತೆ ಮಾಡಿರುತ್ತೇನೆ. ನಂತರ ಸರ್ಕಾರಿ ನೌಕರಿ ಬಗ್ಗೆ ಕೇಳಿದಾಗ ಸ್ವಲ್ಪ ಹಣ ಬೇಕಾದರೆ ಕೇಳು ಕೆಲಸದ ಕತೆ ಆಮೇಲೆ ನೋಡೋಣ ಎಂದು ಅವಾಯ್ಡ್ ಮಾಡುತ್ತಿದ್ದರು.

ನಾನು ಯಾವಾಗ ಅವರಿಗೆ ನನ್ನನ್ನು ಹೇಗೆ ಬೇಕೋ ಹಾಗೆ ಬಳಸಿಕೊಂಡು ಈಗ ಯಾಕೆ ಕೆಲಸ ಕೊಡುತ್ತಿಲ್ಲ ಎಂದು ಕೇಳಿದಾಗ ಹೋಗೆ ಸೂಳೆ ಸೊಂಟದಲ್ಲಿ ಕುಂದು ಇಟ್ಟುಕೊಂಡೇ ಈಗ ಯಾಕೆ ಕೆಲಸ ಬಂದ್ರೆ ಸರ್ಕಾರಿ ಕೆಲಸ ಕೊಡೋಕೆ ಆಗುತ್ತಾ ಎಂದು ಬೈದು ಕಳಿಸಿದರು.

ಇದಾದ ನಂತರ ಅವರು ನನಗೆ ಮಾತು ಆಡಿದ ಮತ್ತು ಲೈಂಗಿಕ ಸಂಭೋಗ ನಡೆಸಿದ ಅಶ್ಲೀಲ ವಿಡಿಯೋ ಮಾಧ್ಯಮಗಳಲ್ಲಿ ಪ್ರಸಾರವಾಗಿದೆ. ನಾನು ಇವರ ವಿರುದ್ಧ ದೂರು ನೀಡದಂತೆ ಈ ರೀತಿ ಕುತಂತ್ರವನ್ನು ರಮೇಶ್ ಜಾರಕಿಹೊಳಿ ಮಾಡಿರುತ್ತಾರೆ. ಹಣವಂತರು, ಪ್ರಭಾವಿಗಳಾದ ಮಾಜಿ ಸಚಿವ ರಮೇಶ ಜಾರಕಿಹೊಳಿ ಅವರಿಂದ ನನಗೂ ಮತ್ತು ಕುಟುಂಬ ಸದಸ್ಯರಿಗೆ ಜೀವ ಬೆದರಿಕೆ ಇದೆ.

ನಾನು ದೂರು ನೀಡದಂತೆ ತಡೆಯಲು ಮತ್ತು ಅವರ ಕೈಗೆ ಸಿಕ್ಕರೆ ಕೊಂದುಬಿಡಲು ಎಲ್ಲ ಪ್ರಯತ್ನ ಮಾಡುತ್ತಿದ್ದಾರೆ ದಯಮಾಡಿ ತಾವು ನನಗೆ ಮತ್ತು ನನ್ನ ಕುಟುಂಬದ ಸದಸ್ಯರಿಗೆ ಭದ್ರತೆ ನೀಡಿ ನನ್ನ ಲೈಂಗಿಕವಾಗಿ ಬಳಸಿಕೊಂಡು ಕೆಲಸ ಕೊಡಿಸದೆ ಮೋಸ ಮಾಡಿ ಅಶ್ಲೀಲವಾಗಿ ನಿಂದಿಸಿ ಕೊಲೆ ಮಾಡಿಸಲು ಪ್ರಯತ್ನ ಮಾಡುತ್ತಿರುವ ರಮೇಶ್ ಜಾರಕಿಹೊಳಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡುತ್ತೇನೆ. ನಾನು ನೇರವಾಗಿ ಯಾವ ಠಾಣೆಗೆ ಬಂದು ದೂರು ನೀಡದಂತೆ ಪೊಲೀಸ್ ಇಲಾಖೆಯನ್ನು ಬಳಸಿಕೊಳ್ಳುತ್ತಿದ್ದಾರೆ. ನನ್ನ ಪರವಾಗಿ ಯಾರೂ ಮಾತನಾಡದಂತೆ ತೇಜೋವಧೆ ಮಾಡುತ್ತಿದ್ದಾರೆ ಹಾಗೂ ನನಗೆ ಸಹಾಯ ಮಾಡಿದವರಿಗೆ ಮಾಡುತ್ತಿರುವವರಿಗೆ ಟಾರ್ಗೆಟ್ ಮಾಡಿ ಅವರ ಮನೆ ಮತ್ತು ಕುಟುಂಬಸ್ಥರಿಗೆ ಹಿಂಸೆ ಕೊಡುತ್ತಿರುವುದರಿಂದ ಬಹಳ ನೋವಾಗಿದೆ.

ನನಗೆ ಭದ್ರತೆ ಇಲ್ಲದ ಕಾರಣ ಕೈಯಲ್ಲಿ ಬರೆದು ಈ ದೂರನ್ನು ನನಗೆ ಪರಿಚಿತರಾದ ವಕೀಲರಾದ ಜಗದೀಶ್ ಅವರ ಮೂಲಕ ಕಳುಹಿಸುತ್ತಿದ್ದೇನೆ.

ದಯವಿಟ್ಟು ನನಗೆ ಆಗುತ್ತಿರುವ ಮಾನಸಿಕ ಹಿಂಸೆ ಮತ್ತು ನನ್ನ ಕುಟುಂಬ ಸದಸ್ಯರು ಎದುರಿಸುತ್ತಿರುವ ಒತ್ತಡ ಅವರನ್ನು ಆತ್ಮಹತ್ಯೆಗೆ ಯತ್ನಿಸುವಂತೆ ಮಾಡಿದ್ದು, ತಾವು ರಮೇಶ ಜಾರಕಿಹೊಳಿ ಮತ್ತು ಅವರ ಕಡೆಯವರಿಂದ ನಮಗೆ ಯಾವುದೇ ಅಪಾಯವಾಗದಂತೆ ರಕ್ಷಣೆ ನೀಡಬೇಕೆಂದು ಕೈಮುಗಿದು ಪ್ರಾರ್ಥನೆ ಮಾಡುತ್ತೇನೆ.

■ ಇಂತಿ ತಮ್ಮ ವಿಶ್ವಾಸಿ